# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 360 |
| 2 | ಸದಸ್ಯರ ಹೆಸರು | ಶ್ರೀ ನಸೀರ್ ಅಹ್ಮದ್<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| 3 | ಉತ್ತರಿಸಬೇಕಾದ ದಿನಾಂಕ | 23.09.2020 |
| 4 | ಉತ್ತರಿಸುವ ಸಚಿವರು | ಕಂದಾಯ ಸಚಿವರು |

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ರಾಜ್ಯದಲ್ಲಿ ಹೊಸದಾಗಿ ನಿರ್ಮಿಸಲಾದ ತಾಲ್ಲೂಕುಗಳಿಗೆ ಮೂಲ ಸೌಕರ್ಯ ಕಲ್ಪಿಸಲು ಇದುವರೆಗೆ ನಿಗದಿಪಡಿಸ ಲಾದ ಅನುದಾನವೆಷ್ಟು;</td><td>2017-18ನೇ ಸಾಲಿನ ಆಯವ್ಯಯದಲ್ಲಿನ ಘೋಷಣೆಯನ್ವಯ ರಾಜ್ಯದಲ್ಲಿ 50 ಹೊಸ ತಾಲ್ಲೂಕುಗಳನ್ನು ರಚಿಸಲಾಗಿದೆ. ಹೊಸದಾಗಿ ರಚಿಸಿರುವ 50 ತಾಲ್ಲೂಕುಗಳು ಕಾರ್ಯಾರಂಭ ಮಾಡಿ, ಆಡಳಿತಾತ್ಮಕ ಪ್ರಕ್ರಿಯೆಯನ್ನು ಪ್ರಾರಂಭಿಸಲು ಹಾಗೂ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸುವ ಸಲುವಾಗಿ ಕೆಳಕಂಡಂತೆ ಅನುದಾನ ನಿಗಧಿಪಡಿಸಲಾಗಿದೆ.
<table>
<tr><th>ಕ್ರ. ಸಂ.</th><th>ವರ್ಷ</th><th>ನಿಗಧಿಪಡಿಸಿರುವ ಅನುದಾನ</th></tr>
<tr><td>1</td><td>2017-18</td><td>ರೂ.10.00 ಕೋಟಿ</td></tr>
<tr><td>2</td><td>2018-19</td><td>ರೂ.7.00 ಕೋಟಿ</td></tr>
<tr><td>3</td><td>2019-20</td><td>ರೂ.7.00 ಕೋಟಿ</td></tr>
<tr><td>4</td><td>2020-21</td><td>ರೂ. 3.00 ಕೋಟಿ</td></tr>
</table></td></tr>
<tr><td>ಆ)</td><td>ಇಲ್ಲಿಯವರೆಗೆ ಬಿಡುಗಡೆ ಮಾಡಲಾದ ಅನುದಾನವೆಷ್ಟು ಹಾಗೂ ಖರ್ಚು ಮಾಡಿದ ಅನುದಾನವೆಷ್ಟು?</td><td>ನೂತನ 50 ತಾಲ್ಲೂಕುಗಳಿಗೆ ಕಂದಾಯ ಇಲಾಖೆಯಿಂದ ಬಿಡುಗಡೆ ಮಾಡಿದ ಅನುದಾನದ ವಿವರ ಕೆಳಕಂಡಂತಿದೆ.
<table>
<tr><th>ಕ್ರ. ಸಂ.</th><th>ವರ್ಷ</th><th>ಬಿಡುಗಡೆ ಮಾಡಿದ ಅನುದಾನ</th></tr>
<tr><td>1</td><td>2017-18</td><td>ಪ್ರತಿ ತಾಲ್ಲೂಕಿಗೆ ರೂ.10.00 ಲಕ್ಷ</td></tr>
<tr><td>2</td><td>2018-19</td><td>ಪ್ರತಿ ತಾಲ್ಲೂಕಿಗೆ ರೂ.10.00 ಲಕ್ಷ</td></tr>
<tr><td>3</td><td>2019-20</td><td>ಪ್ರತಿ ತಾಲ್ಲೂಕಿಗೆ ರೂ.5.00 ಲಕ್ಷ</td></tr>
<tr><td>4</td><td>2020-21</td><td>ಪ್ರಸಕ್ತ ಸಾಲಿನ ಆಯವ್ಯಯದಲ್ಲಿ ಒದಗಿಸಿರುವ ಅನುದಾನದನ್ವಯ ಬಿಡುಗಡೆ ಮಾಡಲು ಕ್ರಮವಹಿಸ ಲಾಗುತ್ತಿದೆ.</td></tr>
</table>
ಈ ಅನುದಾನವನ್ನು ತಾಲ್ಲೂಕು ಆಡಳಿತಕ್ಕೆ ಅವಶ್ಯವಿರುವ ಸಾಮಗ್ರಿಗಳು ಹಾಗೂ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಉಪಯೋಗಿಸಲಾಗುತ್ತಿದೆ.</td></tr>
<tr><td>ಇ)</td><td>ಸಂಪೂರ್ಣ ಮೂಲಭೂತ ವ್ಯವಸ್ಥೆ ಕಲ್ಪಿಸಲು ಇನ್ನೂ ಎಷ್ಟು ದಿನಗಳ ಕಾಲಾವಕಾಶ ಬೇಕು? (ವಿವರ ನೀಡುವುದು)</td><td>ಹೊಸದಾಗಿ ರಚಿಸಲಾಗಿರುವ 50 ತಾಲ್ಲೂಕುಗಳಲ್ಲಿ 13 ತಾಲ್ಲೂಕುಗಳಿಗೆ ಮಿನಿ ವಿಧಾನಸೌಧ ಕಟ್ಟಡವನ್ನು ನಿರ್ಮಿಸಲು ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ. ಉಳಿದ ತಾಲ್ಲೂಕು ಗಳಲ್ಲಿ ಮಿನಿವಿಧಾನಸೌಧ ನಿರ್ಮಿಸಲು ಸೂಕ್ತ ಸ್ಥಳವನ್ನು ಗುರುತಿಸಿ ಪ್ರಸ್ತಾವನೆ ಸಲ್ಲಿಸುವಂತೆ ಸಂಬಂಧಿಸಿದ ಜಿಲ್ಲಾಧಿಕಾರಿಗಳಿಗೆ ತಿಳಿಸಲಾಗಿದೆ.<br>ಪ್ರಮುಖ ಇಲಾಖೆಗಳಾದ ಒಳಾಡಳಿತ, ಕೃಷಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ, ಪ್ರಾಥಮಿಕ ಶಿಕ್ಷಣ, ಸಮಾಜ ಕಲ್ಯಾಣ ಮತ್ತು ಲೋಕೋಪಯೋಗಿ ಇಲಾಖೆಗಳನ್ನು ಪ್ರಾರಂಭಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಸಂಬಂಧಿಸಿದ ಇಲಾಖೆಗಳ</td></tr>
</table>

| | | |
|---|---|---|
| | | ಮುಖ್ಯಸ್ಥರಿಗೆ ಸೂಚಿಸಲಾಗಿದೆ.<br><br>ಹೊಸದಾಗಿ ರಚನೆಯಾದ ತಾಲ್ಲೂಕುಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸುವುದು ರಾಜ್ಯದ ಹಣಕಾಸಿನ ಪರಿಸ್ಥಿತಿಯನ್ನು ಅವಲಂಬಿಸಿರುತ್ತದೆ. ಈ ಪ್ರಸ್ತಾವನೆಯು ಸಂಪನ್ಮೂಲಗಳ ಕ್ರೋಢೀಕರಣ ಹಾಗೂ ಆರ್ಥಿಕ ಇತಿಮಿತಿಗಳನ್ನು ಒಳಗೊಂಡಿರುವುದರಿಂದ ಕಾಲಾವಧಿಯನ್ನು ನಿಗದಿಪಡಿಸಿರುವುದಿಲ್ಲ. |

<u>ಸಂಖ್ಯೆ: ಕಂಇ 18 ಎಲ್‌ಆರ್‌ಡಿ 2020</u>

**(ಆರ್ ಅಶೋಕ)**
ಕಂದಾಯ ಸಚಿವರು